ಕರ್ನಾಟಕ ಸರ್ಕಾರ

# ಜಿಲ್ಲಾಧಿಕಾರಿಗಳ ಕಾರ್ಯಾಲಯ, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ

---

ಸಂಖ್ಯೆ:ವಿಪತ್ತು ನಿರ್ವಹಣೆ:ಕೋವಿಡ್-19:ಸಿಆರ್-1/2021-22 ದಿನಾಂಕ:05-06-2021

## :: ಆದೇಶ ::

ಕೋವಿಡ್-19 ರೋಗ ತಡೆ ಹಿನ್ನಲೆಯಲ್ಲಿ ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ ಆರ್‌ಡಿ 158 ಟಿಎನ್‌ಆರ್ 2020, ದಿನಾಂಕ:20-04-2021ರಲ್ಲಿ ದಿನಾಂಕ:21-04-2021ರಿಂದ ಅನ್ವಯಿಸುವಂತೆ ಕೋವಿಡ್-19 ರೋಗ ತಡೆ ಮಾರ್ಗಸೂಚಿಗಳನ್ನು ಹೊರಡಿಸಿದ್ದು, ತದನಂತ ದಿನಾಂಕ:21-4-2021, ದಿನಾಂಕ:23-4-2021, ದಿನಾಂಕ:25-4-2021 ಮತ್ತು ದಿನಾಂಕ:26-4-2021 ರಲ್ಲಿ ಹೆಚ್ಚುವರಿ ಮಾರ್ಗಸೂಚಿಗಳನ್ನು ಜಾರಿಗೊಳಿಸಲಾಗಿರುತ್ತದೆ. ಸರ್ಕಾರಿ ಆದೇಶ ಸಂಖ್ಯೆ ಆರ್‌ಡಿ 158 ಟಿಎನ್‌ಆರ್ 2020, ದಿನಾಂಕ:21-05-2021ರಲ್ಲಿ ಪರಿಷ್ಕೃತ ಮಾರ್ಗಸೂಚಿಗಳನ್ನು ಜಾರಿಗೊಳಿಸಿದ್ದು, ಸದರಿ ಆದೇಶವು ದಿನಾಂಕ:7-6-2021ರ ಮುಂಜಾನೆ 6.00ಗಂಟೆಯವರೆಗೆ ಜಾರಿಯಲ್ಲಿರುತ್ತದೆ. ಈ ಆದೇಶವನ್ನು ಅನುಸರಿಸಿ ಈ ಪ್ರಾಧಿಕಾರದಿಂದ ಪರ್ಯಾಯ ದಿನಗಳಲ್ಲಿ ಸಂಪೂರ್ಣ ಲಾಕ್‌ಡೌನ್ ಜಾರಿಗೊಳಿಸಲಾಗಿರುತ್ತದೆ.

ಸರ್ಕಾರದ ಆದೇಶ ಸಂಖ್ಯೆ ಆರ್‌ಡಿ 158 ಟಿಎನ್‌ಆರ್ 2020, ದಿನಾಂಕ:03-06-2021ರಲ್ಲಿ ದಿನಾಂಕ: 21-5-2021ರ ಆದೇಶವನ್ನು ದಿನಾಂಕ:14-6-2021ರ ಮುಂಜಾನೆ 6.00ಗಂಟೆವರೆಗೆ ವಿಸ್ತರಿಸಿ ಆದೇಶಿಸಲಾಗಿರುತ್ತದೆ. ಸರ್ಕಾರಿ ಆದೇಶದ ಅನುಬಂಧದಲ್ಲಿ ಪ್ರಸ್ತಾಪಿಸಿರುವ ಚಟುವಟಿಕೆಗಳನ್ನು ಹೊರತುಪಡಿಸಿ, ಉಳಿದ ಎಲ್ಲಾ ಚಟುವಟಿಕೆಗಳನ್ನು ಸಾಮಾಜಿಕ ಅಂತರ ಹಾಗೂ ಸೂಕ್ತ ಎಚ್ಚರಿಕಾ ಕ್ರಮಗಳನ್ನು ಅನುಸರಿಸಿ ಮುಂದುವರೆಸಲು ಅವಕಾಶ ನೀಡಲಾಗಿದೆ. ವೈಯಕ್ತಿಕ ಓಡಾಟಗಳು, ಅನಿವಾರ್ಯವಲ್ಲದ ಚಟುವಟಿಕೆಗಳ ಕಾರ್ಯನಿರ್ವಹಣೆಯು ಕಡ್ಡಾಯವಾಗಿ ನಿಷೇಧಿಸಿ ಆದೇಶಿಸಿದ್ದು, ಇದನ್ನು ಉಲ್ಲಂಘಿಸುವವರ ವಿರುದ್ಧ ವಿಪತ್ತು ನಿರ್ವಹಣಾ ಕಾಯ್ದೆ-2005 ಮತ್ತು ಭಾರತೀಯ ದಂಡ ಸಂಹಿತೆಯನ್ವಯ ಸೂಕ್ತ ಕಾನೂನು ಕ್ರಮಕ್ಕೆ ಒಳಪಡಿಸಲಾಗುವುದು.

ಜಿಲ್ಲಾ ವ್ಯಾಪ್ತಿಗೆ ಸಂಬಂಧಪಟ್ಟಂತೆ ಸಾರ್ವಜನಿಕ ಆರೋಗ್ಯದ ದೃಷ್ಟಿಯಿಂದ ಸೋಂಕು ಹರಡದಂತೆ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಬೇಕಾಗಿರುವುದರಿಂದ **ದಿನಾಂಕ:07-06-2021ರ ಮುಂಜಾನೆ 6.00 ರಿಂದ ದಿನಾಂಕ:14-06-2021ರ ಮುಂಜಾನೆ 6.00ರವರೆಗೆ ಅನುಮತಿಸಲಾಗಿರುವ ಚಟುವಟಿಕೆಗಳನ್ನು ಬೆಳಿಗ್ಗೆ 6.00 ರಿಂದ ಬೆಳಿಗ್ಗೆ 10.00ಗಂಟೆಯವರೆಗೆ ಹಾಗೂ ಪ್ರಸ್ತುತ ಮುಂಗಾರು ಹಂಗಾಮು ಕೃಷಿ ಚಟುವಟಿಕೆಗಳು ಪ್ರಗತಿಯಲ್ಲಿರುವುದರಿಂದ ಬಿತ್ತನೆ ಬೀಜ, ರಸಗೊಬ್ಬರ ಮಾರಾಟ ಮಳಿಗೆಗಳಿಗೆ ಮಾತ್ರ ಮಧ್ಯಾಹ್ನ 12.00ಗಂಟೆಯವರೆಗೆ ಕಾರ್ಯನಿರ್ವಹಿಸಲು ಅವಕಾಶ ನೀಡಲಾಗಿದೆ.** ಬೆಳಿಗ್ಗೆ 10.00 ರಿಂದ ಮುಂದಿನ ದಿನದ ಮುಂಜಾನೆ 6.00ರವರೆಗೆ ಸರ್ಕಾರಿ ಆದೇಶದ ಅನುಬಂಧದಲ್ಲಿ ಪ್ರಸ್ತಾಪಿಸಿರುವ ಚಟುವಟಿಕೆಗಳನ್ನು ಹೊರತುಪಡಿಸಿ, ಉಳಿದ ಎಲ್ಲಾ ಚಟುವಟಿಕೆಗಳನ್ನು ನಿರ್ಬಂಧಿಸಿ ಆದೇಶಿಸಿರುತ್ತೇನೆ.

ಈ ಆದೇಶದ ಪರಿಣಾಮಕಾರಿ ಜಾರಿಗೆ ಕ್ರಮ ಕೈಗೊಳ್ಳಲು ಪೊಲೀಸ್ ಅಧೀಕ್ಷಕರು, ಚಿತ್ರದುರ್ಗ ಜಿಲ್ಲೆ, ಉಪವಿಭಾಗಾಧಿಕಾರಿಗಳು, ಚಿತ್ರದುರ್ಗ ಉಪವಿಭಾಗ, ಜಿಲ್ಲೆಯ ಎಲ್ಲಾ ತಾಲ್ಲೂಕಿನ ತಹಶೀಲ್ದಾರ್‌ಗಳು, ಎಲ್ಲಾ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳ ಪೌರಾಯುಕ್ತರು/ಮುಖ್ಯಾಧಿಕಾರಿಗಳಿಗೆ ಸೂಚಿಸಿದೆ.

ಸರ್ಕಾರದ ಮಾರ್ಗಸೂಚಿಯಲ್ಲಿ ಪ್ರಸ್ತಾಪಿಸಿರುವ ವಿವಿಧ ವಲಯವಾರು ಚಟುವಟಿಕೆಗಳ ನಿರ್ಬಂಧಗಳ ಬಗ್ಗೆ ಆದೇಶವನ್ನು ಪರಿಣಾಮಕಾರಿ ಜಾರಿಗೊಳಿಸಿ, ನಿಯಮಿತವಾಗಿ ಪರಿಸ್ಥಿತಿಯನ್ನು ಅವಲೋಕಿಸಿ ಕ್ರಮ ಕೈಗೊಳ್ಳಲು ಸಂಬಂಧಪಟ್ಟ ಇಲಾಖೆಯ ಜಿಲ್ಲಾ ಮುಖ್ಯಸ್ಥರುಗಳಿಗೆ ಸೂಚಿಸಿದೆ.

(ಕವಿತಾ ಎಸ್ ಮನ್ನಿಕೇರಿ)
ಜಿಲ್ಲಾಧಿಕಾರಿಗಳು ಹಾಗೂ ಅಧ್ಯಕ್ಷರು,
ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ
ಚಿತ್ರದುರ್ಗ ಜಿಲ್ಲೆ

<u>ಪ್ರತಿಯನ್ನು ಮಾಹಿತಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ:-</u>

1) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯಿತಿ, ಚಿತ್ರದುರ್ಗ
2) ಪೊಲೀಸ್ ಅಧೀಕ್ಷಕರು, ಚಿತ್ರದುರ್ಗ ಜಿಲ್ಲೆ
3) ಉಪವಿಭಾಗಾಧಿಕಾರಿಗಳು, ಚಿತ್ರದುರ್ಗ ಉಪವಿಭಾಗ, ಚಿತ್ರದುರ್ಗ
4) ಯೋಜನಾ ನಿರ್ದೇಶಕರು, ಜಿಲ್ಲಾ ನಗರಾಭಿವೃದ್ಧಿ ಕೋಶ, ಚಿತ್ರದುರ್ಗ
5) ಜಿಲ್ಲೆಯ ಎಲ್ಲಾ ತಾಲ್ಲೂಕಿನ ತಹಶೀಲ್ದಾರ್‌ಗಳು
6) ಜಿಲ್ಲೆಯ ಎಲ್ಲಾ ತಾಲ್ಲೂಕಿನ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳು
7) ಜಿಲ್ಲೆಯ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳ ಪೌರಾಯುಕ್ತರು/ಮುಖ್ಯಾಧಿಕಾರಿಗಳು
8) ಸಹಾಯಕ ನಿರ್ದೇಶಕರು, ವಾರ್ತಾ & ಪ್ರಚಾರ ಇಲಾಖೆ, ಚಿತ್ರದುರ್ಗ

Scanned by CamScanner